# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1047. |
| ಸದಸ್ಯರ ಹೆಸರು | : | ಶ್ರೀ ಪಿ.ಹೆಚ್ ಪೂಜಾರ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 23.02.2024 |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದ ಗ್ರಾಮ ಪಂಚಾಯಿತಿಗಳಲ್ಲಿ ಅನೇಕ ಕಡೆ ಮೇಲಿನ ಹಂತದ ಅಧಿಕಾರಿಗಳು ಹಾಗೂ ತಾಲ್ಲೂಕು ಹಾಗೂ ಜಿಲ್ಲಾ ಮಟ್ಟದ ಪ್ರತಿನಿಧಿಗಳು ನೇರವಾಗಿ ಗ್ರಾಮ ಪಂಚಾಯಿತಿಗಳ ಆಡಳಿತದಲ್ಲಿ ಹಾಗೂ ನಿರ್ಣಯಗಳಲ್ಲಿ ಹಸ್ತಕ್ಷೇಪ ಮಾಡುತ್ತಿರುತ್ತಿದ್ದು ಈ ರೀತಿ ಹಸ್ತಕ್ಷೇಪ ಮಾಡುವ ಮೂಲಕ ಗ್ರಾಮ ಪಂಚಾಯಿತಿಗಳನ್ನು ತಮ್ಮ ಕೈಕೆಳಗೆ ಕಾರ್ಯನಿರ್ವಹಿಸುವ ಶಾಖಾ ಕಚೇರಿಗಳನ್ನಾಗಿ ಮಾಡಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಜಿಲ್ಲಾ ಮಟ್ಟದ ಜನ ಪ್ರತಿನಿಧಿಗಳು ನೇರವಾಗಿ ಗ್ರಾಮ ಪಂಚಾಯಿತಿಗಳ ಆಡಳಿತದಲ್ಲಿ ಹಾಗೂ ನಿರ್ಣಯಗಳಲ್ಲಿ ಹಸ್ತಕ್ಷೇಪ ಮಾಡಲು ಅವಕಾಶವಿಲ್ಲ.<br><br>ಆದರೆ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 234ರಲ್ಲಿ ಯಾವುದೇ ಗ್ರಾಮ ಪಂಚಾಯಿತಿಯ ಅಥವಾ ತಾಲ್ಲೂಕು ಪಂಚಾಯಿತಿಯ ಪುಸ್ತಕವನ್ನು, ದಾಖಲೆಗಳನ್ನು ಮತ್ತು ಲೆಕ್ಕಪತ್ರ ವಿವರಗಳನ್ನು, ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ತರಿಸಿಕೊಳ್ಳಬಹುದು, ಪರಿಶೀಲಿಸಿ ತಪ್ಪುಗಳಾಗಿದ್ದರೆ ಸರಿಪಡಿಸಲು ಸೂಚಿಸಲು ಅಧಿಕಾರವಿದೆ.<br><br>[illegible] ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಯು ಗ್ರಾಮ ಪಂಚಾಯಿತಿಗಳ ವಿಷಯದಲ್ಲಿ ಈ ಮೇಲಿನಂತೆ ಕ್ರಮ ವಹಿಸಬಹುದಾಗಿದೆ.<br><br>ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 237(1)ರಲ್ಲಿ ಗ್ರಾಮ ಪಂಚಾಯಿತಿಯ ಕಾನೂನು ಬಾಹಿರ ನಿರ್ಣಯ / ಆದೇಶವನ್ನು ಅಮಾನತ್ತುಗೊಳಿಸುವ ಅಧಿಕಾರ ತಾಲ್ಲೂಕು ಪಂಚಾಯತಿ ಅಧ್ಯಕ್ಷರಿಗೆ ಮತ್ತು ಪ್ರಕರಣ 237(3) ರಲ್ಲಿ ತಾಲ್ಲೂಕು ಪಂಚಾಯತಿಯ ನಿರ್ಣಯ ಮತ್ತು ಆದೇಶವನ್ನು ರದ್ದುಗೊಳಿಸುವ ಅಧಿಕಾರ ಜಿಲ್ಲಾ ಪಂಚಾಯತಿ ಅಧ್ಯಕ್ಷರಿಗೆ ಅಧಿಕಾರವಿದೆ |

| | | |
|---|---|---|
| (ಆ) | ಈ ಕುರಿತಂತೆ ಈಗಾಗಲೇ ಕರ್ನಾಟಕ ರಾಜ್ಯ ಗ್ರಾಮ ಪಂಚಾಯಿತಿ ಸದಸ್ಯರ ಮಹಾ ಒಕ್ಕೂಟ ವಿಜಯಪುರ ಜಿಲ್ಲೆಯು ಗ್ರಾಮ ಪಂಚಾಯಿತಿಗಳ ಆಡಳಿತದಲ್ಲಿ ಹಾಗೂ ನಿರ್ಣಯಗಳಲ್ಲಿ ಹಸ್ತಕ್ಷೇಪ ಮಾಡುತ್ತಿರುವ ಬಗ್ಗೆ ಮನವಿಯನ್ನು ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಸಂವಿಧಾನ ಬದ್ಧ ಸಂಸ್ಥೆಗಳಾದ ಗ್ರಾಮ ಪಂಚಾಯಿತಿಗಳಿಗೆ ಪ್ರಜಾಸತ್ತಾತ್ಮಕವಾಗಿ ಆಯ್ಕೆಯಾದ ಗ್ರಾಮ ಪಂಚಾಯಿತಿಯ ಅಧ್ಯಕ್ಷರು ಉಪಾಧ್ಯಕ್ಷರು ಮತ್ತು ಸದಸ್ಯರು ಕೇವಲ ಮೂಕ ಪ್ರೇಕ್ಷಕರಾಗಿರುವುದು ಸರಿಯಾದ ಕ್ರಮವೇ; | ಬಂದಿದೆ.<br><br>ಮೇಲೆ (ಅ) ಉತ್ತರದಲ್ಲಿ ನೀಡಿರುವ ಸಂದರ್ಭಗಳನ್ನು ಹೊರತುಪಡಿಸಿ ಅನಾವಶ್ಯಕವಾಗಿ ಹಸ್ತಕ್ಷೇಪ ಮಾಡಿರುವ ನಿರ್ದಿಷ್ಟ ಪ್ರಕರಣಗಳನ್ನು ಗ್ರಾಮ ಪಂಚಾಯತಿ ಅಧ್ಯಕ್ಷ ಮತ್ತು ಉಪಾಧ್ಯಕ್ಷರುಗಳು ಸರ್ಕಾರದ ಗಮನಕ್ಕೆ ತರಲು ಅವಕಾಶವಿದ್ದು, ಅದರಂತೆ ದೂರನ್ನು ಸಲ್ಲಿಸಿದರೆ ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು. |
| (ಇ) | ಮೇಲಾಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ನೇರವಾಗಿ ಪಂಚಾಯಿತಿಗಳ ಆಡಳಿತದಲ್ಲಿ ಹಸ್ತಕ್ಷೇಪ ಮಾಡುತ್ತಿರುವುದರಿಂದ ಮೀಸಲಾತಿಯ ಉದ್ದೇಶ ಸಂಪೂರ್ಣ ವಿಫಲವಾಗಿದ್ದು, ಅಧಿಕಾರವಿದ್ದರೂ ಚಲಾಯಿಸಲಾಗದ ಪರಿಸ್ಥಿತಿ ನಿರ್ಮಾಣವಾಗಿರುವುದನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು; | ಅಧಿಕಾರದ ಅವಕಾಶ ಮೀರಿ ಗ್ರಾಮ ಪಂಚಾಯತಿ ಆಡಳಿತದಲ್ಲಿ ಹಸ್ತಕ್ಷೇಪ ಮಾಡುವ, ಒತ್ತಾಯಿಸುವ ಅಧಿಕಾರಿಗಳು ಮತ್ತು ಜನ ಪ್ರತಿನಿಧಿಗಳ ವಿರುದ್ಧ ಕ್ರಮ ಕೈಗೊಳ್ಳಲು ಪ್ರಕರಣ 282 ರಡಿ ಅವಕಾಶವಿರುತ್ತದೆ. |
| (ಈ) | ಸಂವಿಧಾನದ ಮತ್ತು ಕರ್ನಾಟಕ ಪಂಚಾಯತ್ ರಾಜ್ ಕಾಯಿದೆಯ ಆಶಯದಂತೆ ಗ್ರಾಮ ಪಂಚಾಯಿತಿಗಳು ಕಾರ್ಯನಿರ್ವಹಿಸುವಂತಾಗಲು ಸಲ್ಲಿಸಿರುವ ವಿವಿಧ ಬೇಡಿಕೆಗಳನ್ನು ಈಡೇರಿಸಲು ಕೈಗೊಂಡ ಕ್ರಮಗಳೇನು ಮತ್ತು ರೂಪುರೇಷಗಳು ಹಾಗೂ ಯೋಜನೆಗಳು ಯಾವುವು; (ಸಂಪೂರ್ಣ ಮಾಹಿತಿ ಒದಗಿಸುವುದು) | ಸರ್ಕಾರದ ಪರಿಶೀಲನೆಯಲ್ಲಿರುತ್ತದೆ |

ಸಂಖ್ಯೆ: ಗ್ರಾಅಪ 130 ಗ್ರಾಪಂಅ 2024

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು